## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Surya Energy Photovataic India Private. Limited, ಕಂಪನಿಗೆ ವಿಜಯಪುರ ಜಿಲ್ಲೆಯ ವಿಜಯಪುರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 48 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Alfresco Renewable Energy Private Limted ಕಂಪನಿಗೆ ವರ್ಗಾಯಿಸಲು ಹಾಗೂ ವರ್ಗಾವಣೆಗೊಂಡ 48 ಮೆ.ವ್ಯಾ ಸಾಮರ್ಥ್ಯವನ್ನು 60 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಇಎನ್ 238 ಎನ್‌ಸಿಇ 2014 ದಿನಾಂಕ:02.01.2016.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 930–ಎಸ್.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ M/s Surya Energy Photovataic India Private. Limited ಕಂಪನಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಹಸಟ್ಟಿ, ದಶ್ಯಾಲ್, ದನ್ಯಾಲ್, ಹರ್‌ನಾಲ್ ಮತ್ತು ಆಟಲಹಟ್ಟ ಗ್ರಾಮಗಳಲ್ಲಿ 48 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ M/s Surya Energy Photovataic India Private. Limited ಕಂಪನಿಯು ತಮಗೆ ಹಂಚಿಕೆಯಾದ 48 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Alfresco Renewable Energy Private Limted ಕಂಪನಿಗೆ ವರ್ಗಾಯಿಸಲು ಕೋರಿ ವರ್ಗಾವಣೆ ಶುಲ್ಕವನ್ನು ಕ್ರೆಡಲ್‌ಗೆ ಪಾವತಿಸಿರುವುದಾಗಿ ಹಾಗೂ M/s Surya Energy Photovataic India Private. Limited ಕಂಪನಿಯು ವರ್ಗಾವಣೆ ಕೋರಿರುವ 48 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 60 ಮೆ.ವ್ಯಾ ಸಾಮ್ಯರ್ಥಕ್ಕೆ ಹೆಚ್ಚಿಸಲು ಕೋರಿ ಹೆಚ್ಚುವರಿ ಶುಲ್ಕ, ಸ್ವಚ್ಛ ಭಾರತ ಶುಲ್ಕ ಹಾಗೂ ಸೇವಾ ಶುಲ್ಕಗಳನ್ನು ಪಾವತಿಸಿರುವುದನ್ನು ಪರಿಶೀಲಿಸಿದ್ದು, M/s Alfresco Renewable Energy Private Limted ಕಂಪನಿಯು Registrar of Companies, Ministry of Corporate Affairs, Government of India, Bangalore ಇವರಲ್ಲಿ ದಿನಾಂಕ: 31.08.2016 ರಂದು CIN ಸಂಖ್ಯೆ No.U40105KA2016PTC096160 ರನ್ವಯ ನೋಂದಣಿಯಾಗಿರುತ್ತದೆ. ಸದರಿ ಕಂಪನಿಯು M/s Nordex SE(Germany) ಕಂಪನಿಯ ಅಂಗ ಸಂಸ್ಥೆಯಾಗಿರುವುದಕ್ಕೆ ದಾಖಲಾತಿಗಳನ್ನು ಸಲ್ಲಿಸುತ್ತಾ, ಹೆಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳಲು ಕೆ.ಇ.ಆರ್.ಸಿ ಅನುಮೋದನೆ ದೊರೆಯದೆ ಇದ್ದಲ್ಲಿ, ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು 3ನೇ ವ್ಯಕ್ತಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಮುಖಾಂತರ ಮಾರಾಟ ಮಾಡುವುದಾಗಿ ತಿಳಿಸಿ, M/s Surya Energy Photovataic India Private Limited ಕಂಪನಿಗೆ ಬಿಜಾಪುರ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾದ 48 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ M/s Alfresco Renewable Energy

....2)

Private Limted ಕಂಪನಿಗೆ ವರ್ಗಾಯಿಸುವ ಬಗ್ಗೆ ಹಾಗೂ ಸದರಿ ಸಾಮರ್ಥ್ಯವನ್ನು 60 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 60 MW capacity M/s Alfresco Renewable Energy Private Limted

| SL No. | Topo sheet No. | Near by villages of the proposed area and district | Geographical area description of the project | Sanctioned capacity in MW | Enhancement proposed in MW | Total capacity in MW |
|---|---|---|---|---|---|---|
| 1 | 47 P /9 | Hasati, Dashyal, Dinyal, Harnal and Atalahati villages in Bijapur Taluk, Bijapur District. | It is splited into 3 sub areas under are divided by Kuntgond Don river, all the 3 areas are completely plain, open type and are situated on the west of Atalahatti around Hosatti and S-W of Dashyal. The area is held in the following Geopgraphical co-ordinates:-<br>Latitude: 16°45'0'' - 16°47'33''N<br>Longitude: 75°30'0'' - 75°37'33''E<br>Peaks: 632, 640, 624, 616 & 609m AMS | 48MW (24 Nos x 2000kw) | 60MW (20 Nos x 3000kw) | 60MW (20 Nos x 3000kw) |
| | Total | | | | | 60 |

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 391 ಎನ್‌ಸಿಇ 2018, ಬೆಂಗಳೂರು, ದಿನಾಂಕ: 12.06.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Surya Energy Photovataic India Private. Limited ಕಂಪನಿಗೆ ಹಂಚಿಕೆಯಾಗಿರುವ 48 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Alfresco Renewable Energy Private Limted ಕಂಪನಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು ಶೆಡ್ಯೂಲ್‌ನಲ್ಲಿರುವಂತೆ 60 ಮೆ.ವ್ಯಾ ಸಾಮರ್ಥ್ಯಕ್ಕೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ ಮತ್ತು ಹೆಚ್ಚಳಗೊಂಡ 12 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು 3ನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

Geographical area description for 60 MW capacity M/s Alfresco Renewable Energy Private Limted

| SL No. | Topo sheet No. | Near by villages of the proposed area and district | Geographical area description of the project | Sanctioned capacity in MW | Enhancement proposed in MW | Total capacity in MW |
|---|---|---|---|---|---|---|
| 1 | 47 P /9 | Hasati, Dashyal, Dinyal, Harnal and Atalahati villages in Bijapur Taluk, Bijapur District. | It is splited into 3 sub areas under are divided by Kuntgond Don river, all the 3 areas are completely plain, open type and are situated on the west of Atalahatti around Hosatti and S-W of Dashyal. The area is held in the following Geopgraphical co-ordinates:-<br>Latitude: 16°45'0'' - 16°47'33''N<br>Longitude: 75°30'0'' - 75°37'33''E<br>Peaks: 632, 640, 624, 616 & 609m AMS | 48MW (24 Nos x 2000kw) | 60MW (20 Nos x 3000kw) | 60MW (20 Nos x 3000kw) |
| | Total | | | | | 60 |

....3)

ಷರತ್ತುಗಳು

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

6. M/s Alfresco Renewable Energy Private Limted ಕಂಪನಿಯು ಹೆಚ್ಚಳಗೊಂಡ 12 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

...4)

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 238 ಎನ್‌ಸಿಇ 2014 ದಿನಾಂಕ:02.01.2016 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

12/02/2018

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು-1.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.

9 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ.

10 ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ, ವಿಜಯಪುರ

11 ಉಪ ಅರಣ್ಯ ಸಂರಕ್ಷಣಾಧಿಕಾರಿ, ವಿಜಯಪುರ ಪ್ರಾದೇಶಿಕ ವಿಭಾಗ, ವಿಜಯಪುರ.

12 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

13 M/s Surya Fields Energy photo Voltaic India (P) Limited., C1-001, Tower C, Ground Floor, The Millenia, No 1 & 2, Murphy Road, Ulsoor, Bangalore-560 008.

14 M/s Alfresco Renewable Energy Private Limited, C1-001, Tower C, Ground Floor, The Millenia, No. 1&2, Murphy Road, Ulsoor, Bangalore – 560 008.

15 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

16 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

17 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.